ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 06-10-2016

# ಪತ್ರಿಕಾ ಆಮಂತ್ರಣ

1) ಸಾಂಸ್ಕೃತಿಕ ರಾಯಭಾರಿಗಳಾಗಿ ಕರ್ನಾಟಕದ ದಾರ್ಶನಿಕರು: ಬಸವಣ್ಣ ಕನಕದಾಸರು ಒಂದು ದಿನ ವಿಚಾರ ಸಂಕಿರಣ:

ದಿನಾಂಕ: 07-10-2016 ಶುಕ್ರವಾರ ಬೆಳಿಗ್ಗೆ 10-30 ಗಂಟೆಗೆ

ಉದ್ಘಾಟನೆ: ಡಾ: ಮುಖ್ಯಮಂತ್ರಿ ಚಂದ್ರು, ಹಿರಿಯ ಕಲಾವಿದರು ಮತ್ತು ಚಿಂತಕರು

ಅಧ್ಯಕ್ಷತೆ: ಗೊ. ರು. ಚನ್ನಬಸಪ್ಪ, ಜಾನಪದ ವಿದ್ವಾಂಸರು

ಸ್ಥಳ: ಸರ್ಕಾರಿ ಆರ್.ಸಿ. ಕಾಲೇಜು ಸಭಾಂಗಣ, ಆರ್.ಸಿ. ಕಾಲೇಜು, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು

2) ಬೀಳ್ಕೊಡುಗೆ ಸಮಾರಂಭ:

ನ್ಯಾಯಮೂರ್ತಿ ಹೆಚ್. ಬಿಳ್ಳಪ್ಪ, ನ್ಯಾಯಾಧೀಶರು, ಕರ್ನಾಟಕ ಉಚ್ಛ ನ್ಯಾಯಾಲಯ

ದಿನಾಂಕ: 07-10-2016 ರಂದು ಮಧ್ಯಾಹ್ನ 2-00 ಗಂಟೆಗೆ

ಸ್ಥಳ: ಕೋರ್ಟ್ ಹಾಲ್ ಸಂಖ್ಯೆ 1, ಪ್ರಿನ್ಸಿಪಲ್ ಬೆಂಚ್, ಕರ್ನಾಟಕ ಉಚ್ಛ ನ್ಯಾಯಾಲಯ, ಬೆಂಗಳೂರು

<u>**ಪತ್ರಿಕಾ ಪ್ರಕಟಣೆ**</u>

# ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

**ಬೆಂಗಳೂರು ಅಕ್ಟೋಬರ್ 6 (ಕರ್ನಾಟಕ ವಾರ್ತೆ)**

**ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ:09-10-2016ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.**

1) **ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಉದಯರಾಗ" ಎಂಬ ಶೀರ್ಷಿಕೆಯಡಿ ಶ್ರೀ. ಬನ್ನಳ್ಳಿ ರಾಜು ಮತ್ತು ತಂಡ , ಬೆಂಗಳೂರು ರವರಿಂದ ಜಾನಪದ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**

2) **ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಸಂಧ್ಯಾರಾಗ" ಎಂಬ ಶೀರ್ಷಿಕೆಯಡಿ ಶ್ರೀ. ಅಶೋಕ್. ಹೆಚ್ ಮತ್ತು ತಂಡ, ಚಿತ್ರದುರ್ಗ ರವರಿಂದ ಸುಗುಮ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**

3) **ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**

4) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:

**I.ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ಸಹಯೋಗದೊಂದಿಗೆ ಚಿ. ಪ್ರನವ್ ಸ್ವರೂಪ್ ರವರಿಂದ ಕರ್ನಾಟಿಕ್ ವಾಯಲಿನ್ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 8.00 ಗಂಟೆಯಿಂದ 9.00 ಗಂಟೆಯವರೆಗೆ ಶ್ರೀ.ವಾಣಿ ವಿದ್ಯಾ ಕೇಂದ್ರ , ಮಾಗಡಿ ರೋಡ್, ಬೆಂಗಳೂರು ಶಾಲಾ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 9.00 ಗಂಟೆಯಿಂದ 10.00 ಗಂಟೆಯವರೆಗೆ ಶ್ರೀಮತಿ. ಶಬನಮ್ ರವರಿಂದ ಭಕ್ತಿ ಹಾಗೂ ಕಭೀರ ಭಜನಾ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

**II.ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ**

- ಬೆಳಿಗ್ಗೆ 7.00 ರಿಂದ ಬೆಳಿಗ್ಗೆ 10.00 ಘಂಟೆಯವರೆಗೆ ಯೋಗ ಪ್ರಾಣ ವಿದ್ಯಾ ಸಂಸ್ಥೆಯ **Soham Healing Center,** ಆರ್.ಟಿ. ನಗರ ಬೆಂಗಳೂರು ರವರ ವತಿಯಿಂದ ಪ್ರಾಣ ಚಿಕಿತ್ಸೆ ನೀಡುವ ಕಾರ್ಯಕ್ರಮವನ್ನು ಉಚಿತವಾಗಿ ಏರ್ಪಡಿಸಲಾಗಿದೆ.

  ಬೆಳಿಗ್ಗೆ 6.00 ಗಂಟೆಯಿಂದ ಮಧ್ಯಾಹ್ನ 12.00 ಗಂಟೆಯವರೆಗೆ ವಿದ್ಯಾರಣ್ಯ ಸಂಸ್ಥೆಯ ವತಿಯಿಂದ ಬುದ್ಧಿವಿಕಲ ಚೇತನ ಮಕ್ಕಳ ವಿವಿಧ ವೇಷಭೂಷಣಗಳ ಪ್ರದರ್ಶನವನ್ನು ಏರ್ಪಡಿಸಲಾಗಿದೆ.

# ಬನ್ನೇರುಘಟ್ಟ ಜೈವಿಕ ಉದ್ಯಾನವನಕ್ಕೆ ಅಕ್ಟೋಬರ್ 11 ರಂದು ರಜೆ ಇಲ್ಲ

ಬೆಂಗಳೂರು ಅಕ್ಟೋಬರ್ 6 (ಕರ್ನಾಟಕ ವಾರ್ತೆ)

ಪ್ರತಿ ಮಂಗಳವಾರಗಳಂದು, ವಾಡಿಕೆಯಂತೆ ಬನ್ನೇರುಘಟ್ಟ ಜೈವಿಕ ಉದ್ಯಾನವನಕ್ಕೆ ರಜೆ ಇರುತ್ತಿತ್ತು. ದಿನಾಂಕ: 11-10-2016 ರ ಮಂಗಳವಾರ ವಿಜಯದಶಮಿ ಹಬ್ಬದ ಪ್ರಯುಕ್ತ ಸರ್ಕಾರಿ ರಜೆ ಹಿನ್ನೆಲೆಯಲ್ಲಿ ಸದರಿ ರಜೆ ದಿನದಂದು ಹೆಚ್ಚು ಪ್ರವಾಸಿಗರು ಈ

ಉದ್ಯಾನವನದ ವೀಕ್ಷಣೆಗೆ ಬರುವುದರಿಂದ, ಪ್ರವಾಸಿಗರ ವೀಕ್ಷಣೆಗೆ ಅನುಕೂಲವಾಗುಂತೆ ಸದರಿ ದಿನದಂದು ಉದ್ಯಾನವನದ ಮೃಗಾಲಯ, ಸಫಾರಿ ಮತ್ತು ಚಿಟ್ಟೆ ಉದ್ಯಾನವನ ಇತ್ಯಾದಿಗಳನ್ನು ತೆರೆದಿರಲಾಗುತ್ತದೆ ಎಂದು ಕಾರ್ಯನಿರ್ವಾಹಕ ನಿರ್ದೇಶಕರು, ಬನ್ನೇರುಘಟ್ಟ ಜೈವಿಕ ಉದ್ಯಾನವನ, ಬನ್ನೇರುಘಟ್ಟ, ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಿಂದುಳಿದ ವರ್ಗಗಳ ಅರ್ಹ ಪತ್ರಿಕೋದ್ಯಮ ಪದವೀಧರರಿಗೆ ವೃತ್ತಿ ಮತ್ತು ನಿರೂಪಣಾ ಕೌಶಲ್ಯ ತರಬೇತಿ ನೀಡಲು ಅರ್ಜಿ ಆಹ್ವಾನ

**ಬೆಂಗಳೂರು ಅಕ್ಟೋಬರ್ 6 (ಕರ್ನಾಟಕ ವಾರ್ತೆ)**

ಅಂಗೀಕೃತ ವಿಶ್ವವಿದ್ಯಾಲಯಗಳಲ್ಲಿ ಪತ್ರಿಕೋದ್ಯಮದಲ್ಲಿ ಪದವಿ, ಸ್ನಾತಕೋತ್ತರ ಪದವಿ, ಡಿಪ್ಲೊಮೊ ಇನ್ ಜರ್ನಲಿಸಂ, ಹಾಗೂ ಅಡಿಯೋ ವಿಷುಯಲ್ ಪದವಿ ಮತ್ತು ವಿದ್ಯುನ್ಮಾನ ಮಾಧ್ಯಮದಲ್ಲಿ ಪದವಿ ಪಡೆದ ಹಿಂದುಳಿದ ವರ್ಗಗಳ ಅರ್ಹ ಅಭ್ಯರ್ಥಿಗಳಿಗೆ 7 ದಿವಸಗಳ ವೃತ್ತಿ ಮತ್ತು ನಿರೂಪಣಾ ಕೌಶಲ್ಯ ತರಬೇತಿ ಶಿಬಿರವನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಏರ್ಪಡಿಸಲಿದೆ.

ಅರ್ಹ ಹಿಂದುಳಿದ ವರ್ಗಗಳ ಅಭ್ಯರ್ಥಿಗಳು ಬೆಂಗಳೂರಿನ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸುದ್ದಿ ಮತ್ತು ಪತ್ರಿಕಾ ವಿಭಾಗದಿಂದ ಹಾಗೂ ಜಿಲ್ಲಾ ವಾರ್ತಾ ಕಚೇರಿಗಳಿಂದ ಅರ್ಜಿ ನಮೂನೆಯನ್ನು ಪಡೆಯಬಹುದು. ಇಲ್ಲವೆ ವೆಬ್‌ಸೈಟ್ **www.karnatakavarthe.org** ನಿಂದ ಅರ್ಜಿಯನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದು.

ಅಭ್ಯರ್ಥಿಯ ಹೆಸರು, ಜನ್ಮ ದಿನಾಂಕ, ಖಾಯಂ ವಿಳಾಸ, ವಿದ್ಯಾರ್ಹತೆ, ಜಾತಿ (ಉಪ ಜಾತಿ), ಶೇಕಡವಾರು ಅಂಕ, ವಾರ್ಷಿಕ ಆದಾಯ, ಉದ್ಯೋಗ ವಿವರ, ಈ ಹಿಂದೆ ಯಾವುದಾದರೂ ತರಬೇತಿ ಪಡೆದ ವಿವರ, ಸ್ವ-ವಿವರಗಳ ಮಾಹಿತಿಯನ್ನು ಭರ್ತಿಮಾಡಿ ಸ್ವ-ವಿಳಾಸವಿರುವ ಲಕೋಟೆಯೊಂದಿಗೆ ಅರ್ಜಿಯನ್ನು ಸಲ್ಲಿಸಬಹುದು. ಈ ಪ್ರಕಟಣೆಗೆ ಮುನ್ನ ಅರ್ಜಿ ಸಲ್ಲಿಸಿರುವವರು ಮತ್ತೊಮ್ಮೆ ಹೊಸದಾಗಿ ಅರ್ಜಿ ಸಲ್ಲಿಸಬೇಕು. ಹಳೆಯ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಸದರಿ ಅರ್ಜಿಯೊಂದಿಗೆ ಅಂಕಪಟ್ಟಿ, ಜಾತಿ, ಪ್ರಮಾಣ ಪತ್ರ, ವಿಳಾಸ ಹಾಗೂ ವಯಸ್ಸನ್ನು ದೃಢೀಕರಿಸುವ ದಾಖಲೆಗಳ ಪ್ರತಿಯನ್ನು ದಿನಾಂಕ: 28-10-2016 ಸಂಜೆ 5-00 ಗಂಟೆಯೊಳಗೆ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನಂ. 17, "ವಾರ್ತಾಸೌಧ", ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001 ಇವರಿಗೆ ಸಲ್ಲಿಸಬೇಕು ಸದರಿ ಲಕೋಟೆಯ ಮೇಲ್ಭಾಗದಲ್ಲಿ " ಪತ್ರಿಕೋದ್ಯಮ ವೃತ್ತಿ ಮತ್ತು ನಿರೂಪಣಾ ಕೌಶಲ್ಯ ತರಬೇತಿ" ಎಂದು ನಮೂದಿಸಬೇಕು.

ಮೆರಿಟ್ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಪದವಿಯನ್ನು ಪೂರ್ಣಗೊಳಿಸಿರುವವರು ಮಾತ್ರ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸುದ್ದಿ ಮತ್ತು ಪತ್ರಿಕಾ ವಿಭಾಗದ

ಸಂಬಂಧಿಸಿದ ಸಹಾಯಕ ನಿರ್ದೇಶಕರನ್ನು ಅಥವಾ ದೂರವಾಣಿ ಸಂಖ್ಯೆ 080 – 22028034/37 ಇವರನ್ನು ಸಂಪರ್ಕಿಸಬಹುದು.

## ಬಿಜಾಪುರ ಸೈನಿಕ ಶಾಲೆ ಪ್ರವೇಶಕ್ಕೆ ಅರ್ಜಿ ಆಹ್ವಾನ

ಬೆಂಗಳೂರು ಅಕ್ಟೋಬರ್ 6 (ಕರ್ನಾಟಕ ವಾರ್ತೆ)

ಬಿಜಾಪುರ ಸೈನಿಕ ಶಾಲೆಗೆ 6 ಮತ್ತು 9 ನೇ ತರಗತಿಗೆ 2017–18 ನೇ ಸಾಲಿನಲ್ಲಿ ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. 6 ನೇ ತರಗತಿ ಪ್ರವೇಶಕ್ಕೆ ಅಭ್ಯರ್ಥಿಯು 2 ಜುಲೈ 2006 ರಿಂದ 1 ಜುಲೈ 2007 ನೇ ಇಸವಿಯೊಳಗೆ ಹುಟ್ಟಿರಬೇಕು. 8–1–2017 ರಂದು ಅರ್ಹತಾ ಪರೀಕ್ಷೆ ನಡೆಯಲಿದೆ.

9 ನೇ ತರಗತಿಯ ಪ್ರವೇಶಕ್ಕೆ ಅಭ್ಯರ್ಥಿಯು 02 ಜುಲೈ 2003 ರಿಂದ 01 ಜುಲೈ 2004 ರೊಳಗೆ ಹುಟ್ಟಿರಬೇಕು. ಹಾಗೂ 8 ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರಬೇಕು. 8–1–2017 ರಂದು ಅರ್ಹತಾ ಪರೀಕ್ಷೆ ನಡೆಯಲಿದೆ.

ವಿಜಾಪುರ, ಗುಲಬರ್ಗಾ, ಬೆಳಗಾವಿ, ಬೆಂಗಳೂರು ಮತ್ತು ಧಾರವಾಡಗಳಲ್ಲಿ ಪರೀಕ್ಷಾ ಕೇಂದ್ರಗಳಿದ್ದು, ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗೆ ಪ್ರಾಂಶುಪಾಲರು, ಬಿಜಾಪುರ ಸೈನಿಕ ಶಾಲೆ, ವಿಜಾಪುರ 586 102 ಅಥವಾ ವೆಬ್‌ಸೈಟ್ www.ssbj.in ನ್ನು ಸಂಪರ್ಕಿಸಬಹುದಾಗಿದೆ. ಅರ್ಜಿ ಪಡೆಯಲು 18–11–2016 ರಂದು ಕಡೆ ದಿನವಾಗಿದೆ. ಭರ್ತಿ ಮಾಡಿದ ಅರ್ಜಿ ಸಲ್ಲಿಸಲು 30–11–2016 ಕಡೆಯ ದಿನ.

## ಅವಧಿ ವಿಸ್ತರಣೆ

ಬೆಂಗಳೂರು ಅಕ್ಟೋಬರ್ 6 (ಕರ್ನಾಟಕ ವಾರ್ತೆ)

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮೆಟ್ರಿಕ್ ನಂತರ ಬಾಲಕ ಮತ್ತು ಬಾಲಕಿಯರ ಸಾಮಾನ್ಯ, ಮಾದರಿ, ವೃತ್ತಿಪರ, ಸ್ನಾತಕೋತ್ತರ, ಮೆಡಿಕಲ್ ಮತ್ತು ಇಂಜಿನಿಯರಿಂಗ್ ಹಾಗೂ ನರ್ಸಿಂಗ್ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕೆ ಪ್ರವರ್ಗ–1, 2 ಎ, 2 ಬಿ, 3 ಎ, 3 ಬಿ, ಪ.ಜಾ/ಪ.ವರ್ಗ ಮತ್ತು ಇತರೆ ಜನಾಂಗಳಿಗೆ ಸೇರಿದ ವಿದ್ಯಾರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಲು 23–8–2016 ರಂದು ಕೊನೆಯ ದಿನವಾಗಿತ್ತು. ಪ್ರಸ್ತುತ ಅರ್ಜಿ ಸಲ್ಲಿಸುವ ದಿನಾಂಕವನ್ನು 24–10–2016 ರವರೆಗೆ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಇಲಾಖೆಯ ವೆಬ್‌ಸೈಟ್ www.backwardclasses.kar.nic.in ನ್ನು ನೋಡಬಹುದು. ಅರ್ಜಿ ಸಲ್ಲಿಸಲು

ತೊಂದರೆಯಾದಲ್ಲಿ bcwhosteladmission@gmail.com ಇ ಮೇಲ್ ಮಾಡಲು ಅಥವಾ ಜಿಲ್ಲಾ/ತಾಲ್ಲೂಕು ಅಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಥವಾ ಸಹಾಯವಾಣಿ ಮೊಬೈಲ್ ಸಂಖ್ಯೆ 9480818013 080–44554444 ನ್ನು ಸಂಪರ್ಕಿಸಬಹುದಾಗಿದೆ.